ವಿಷಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿದ್ದು, ಯಥಾಸ್ಥಿತಿ ಕಾಪಾಡಲು ಉಚ್ಚ ನ್ಯಾಯಾಲಯವು ಮದ್ಯಂತರ ಆದೇಶ ನೀಡಿರುತ್ತದೆ.

ವಿಷಯ ಉಚ್ಚ ನ್ಯಾಯಾಲಯದ ಮುಂದೆ ಇರುವುದರಿಂದ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ : – ರಾಜ್ಯದ ಎ.ಪಿ.ಎಂ.ಸಿ.ಗಳಿಗೆ ಚುನಾವಣೆ ನಡೆಸುವ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 361(644)

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ(ಔರಾದ್)

ಮಾನ್ಯ ವ್ಯವಸಾಯೋತ್ಪನ್ನ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ಕೃಷಿ ವ್ಯವಸಾಯೋತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಯಾವಾಗ ಚುನಾವಣೆ ನಡೆಸಲಾಗುವುದು;

ಆ) ಆ ಬಗ್ಗೆ ದೀರ್ಘ ಅವಧಿಯಿಂದ ಚುನಾವಣೆಗಳನ್ನು ಮುಂದೂಡುತ್ತಾ ಬರುತ್ತಿರಲು ಕಾರಣಗಳೇನು;

ಇ) ರಾಜ್ಯ ಸರ್ಕಾರವು ಕೂಡಲೇ ಎ.ಪಿ.ಎಂ.ಸಿಗಳಿಗೆ ಚುನಾವಣೆಗಳನ್ನು ನಡೆಸುವ ದಿನಾಂಕಗಳನ್ನು ಪ್ರಕಟಿಸಲು ಕ್ರಮ ಕೈಗೊಳ್ಳುವುದೇ?

ಶ್ರೀ ಮದನ ಗೋಪಾಲನಾಯಕ್

(ವ್ಯವಸಾಯೋತ್ಪನ್ನ ಮಾರುಕಟ್ಟೆ ರಾಜ್ಯ ಸಚಿವರು)

ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯ್ದೆ, 1966ಕ್ಕೆ-1991ರ ಕರ್ನಾಟಕ ಕಾಯ್ದೆ ಸಂಖ್ಯೆ 16ರ ಮೂಲಕ ತಿದ್ದುಪಡಿ ಮಾಡಿರುವ ಹಿನ್ನೆಲೆಯಲ್ಲಿ ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ನಿಯಮಾವಳಿ ೧೯೬೮ರ ಚುನಾವಣೆಗೆ ಸಂಬಂಧಿಸಿದ ನಿಯಮಗಳ ತಿದ್ದುಪಡಿ ಮಾಡುವ ಬಗ್ಗೆ ಪ್ರಾರಂಭಿಕ ಅಧಿಸೂಚನೆ ಹೊರಡಿಸಿದ್ದು ಸದರಿ ನಿಯಮಾವಳಿಗಳ ತಿದ್ದುಪಡಿಗೆ ಸಾರ್ವಜನಿಕರಿಂದ ಆಕ್ಷೇಪಣೆಗಳು ಬಂದ ನಂತರ ಪರಿಶೀಲಿಸಿ ಆನಂತರ ಅಂತಿಮ ಅಧಿಸೂಚನೆ ಹೊರಡಿಸಬೇಕಾಗಿರುತ್ತದೆ. ಇದೂ ಅಲ್ಲದೆ ಸದರಿ ಕಾಯ್ದೆಯ ಪ್ರಕರಣಕ್ಕೆ ತಿದ್ದುಪಡಿ ಮಾಡಿರುವ ಪ್ರಯುಕ್ತ ಕೆಲವೊಂದು ಮಾರುಕಟ್ಟೆ ಸಮಿತಿಗಳ ಕ್ಷೇತ್ರಗಳ ಸಂಯೋಜನೆ -ವಿಭಜನೆ ಮಾರುಕಟ್ಟೆ ಕ್ಷೇತ್ರಗಳ ಬದಲಾವಣೆ ಸಹಾ ಸರ್ಕಾರದ ಪರಿಶೀಲನೆಯಲ್ಲಿದ್ದು, ಈ ಎಲ್ಲಾ ಪ್ರಕ್ರಿಯೆಗಳು ಮುಗಿದ ನಂತರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಚುನಾವಣೆ ನಡೆಸುವ ಬಗ್ಗೆ ಸರ್ಕಾರ ಸೂಕ್ತ ಸಮಯದಲ್ಲಿ ತೀರ್ಮಾನ ತೆಗೆದುಕೊಳ್ಳುವುದು.

ವಿಷಯ : – ರಸಗೊಬ್ಬರ ಮಾರಾಟದ ಡಿ-ಕಂಟ್ರೋಲ್ ಆದಮೇಲೆ ರಾಜ್ಯ ಹಾಗೂ ಕೇಂದ್ರ

ಸರ್ಕಾರಗಳು ಸಬ್ಸಿಡಿಯನ್ನು ನೀಡುತ್ತಿರುವ ವಿಧಾನದ ಬಗ್ಗೆ

ಚುಕ್ಕೆ ರಹಿತ ಪ್ರಶ್ನೆಸಂಖ್ಯೆ 362(643)

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ(ಔರಾದ್)

ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?